# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಮತ್ತು ತರಬೇತಿ ಅಭಿಯಾನ ಯೋಜನೆಯಡಿ (NMAET) ಕೃಷಿ ವಿಸ್ತರಣೆ ಉಪ ಅಭಿಯಾನ (SMAE) ಕಾರ್ಯಕ್ರಮಕ್ಕೆ ಎರಡನೇ ಕಂತಿನ ಉಳಿಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ

1. ಸರ್ಕಾರದ ಆದೇಶ ಸಂಖ್ಯೆ: ಕೃಇ 80 ಕೃಉಇ 2018, ದಿನಾಂಕ: 28.07.2018.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: F.No. 36-5/2017-AE/Extn.Desk, ದಿನಾಂಕ: 05.12.2018.
3. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 1 BGL 2018, ದಿನಾಂಕ: 13.12.2018.
4. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಕೃಇ/ಆತ್ಮ/ಅನುದಾನ/2018-19, ದಿನಾಂಕ: 14.12.2018.
5. ಸರ್ಕಾರದ ಆದೇಶ ಸಂಖ್ಯೆ: ಕೃಇ 80 ಕೃಉಇ 2018, ದಿನಾಂಕ: 27.12.2018 & ತಿದ್ದುಪಡಿ ದಿನಾಂಕ: 18.01.2019.
6. ಸರ್ಕಾರದ ಆದೇಶ ಸಂಖ್ಯೆ: FD 139 BRS 2018, ದಿನಾಂಕ: 08.02.2019.

ಪ್ರಸ್ತಾವನೆ:

2018-19ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆ ಲೆಕ್ಕ ಶೀರ್ಷಿಕೆ:2401-00-800-1-53 ಅಡಿ ಒಟ್ಟು ರೂ.8530.00 ಲಕ್ಷ ಅನುದಾನ ನಿಗದಿಪಡಿಸಲಾಗಿದ್ದು, ಪರಿಷ್ಕೃತ ಅಂದಾಜಿನಲ್ಲಿ ಹೆಚ್ಚುವರಿಯಾಗಿ ರೂ. 6987.95 ಲಕ್ಷಗಳನ್ನು ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ವಿಸ್ತರಣೆ ಉಪ ಅಭಿಯಾನ (SMAE) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, ಮೊದಲನೇ ಕಂತಿನ ಅನುದಾನ ರೂ. 2153.17 ಲಕ್ಷಗಳನ್ನು 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 ಅಡಿ ಬಿಡುಗಡೆ ಮಾಡುತ್ತಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಮಂಜೂರಾತಿ ನೀಡಿರುತ್ತದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2018-19ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ವಿಸ್ತರಣೆ ಉಪ ಅಭಿಯಾನ (SMAE) ಕಾರ್ಯಕ್ರಮಕ್ಕೆ ಕೇಂದ್ರದ ಪಾಲಿನ ಅನುದಾನವನ್ನಾಗಿ ಎರಡನೇ ಕಂತಿನ ಅನುದಾನ ರೂ. 1291.91 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಸದರಿ ಕೇಂದ್ರ ಸರ್ಕಾರದ ಅನುದಾನ ರೂ. 1291.91 ಲಕ್ಷಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ದೃಢೀಕರಿಸಲಾಗಿರುತ್ತದೆ.

ಮೇಲೆ ಓದಲಾದ (4)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ವಿಸ್ತರಣೆ ಉಪ ಅಭಿಯಾನ (SMAE) ಕಾರ್ಯಕ್ರಮದಡಿ ಎರಡನೇ ಕಂತಿನ ಅನುದಾನವಾಗಿ ಕೇಂದ್ರ ಸರ್ಕಾರದಿಂದ ರೂ. 1291.91 ಲಕ್ಷಗಳು ಬಿಡುಗಡೆಯಾಗಿದ್ದು, ಸದರಿ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ. 861.27 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. 2153.18 ಲಕ್ಷಗಳನ್ನು ಬಿಡುಗಡೆ ಮಾಡಬೇಕಿದ್ದು, ಸದರಿ ಅನುದಾನದಲ್ಲಿ 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53ರಡಿ ಬಿಡುಗಡೆ ಮಾಡಲು ಲಭ್ಯವಿರುವ ಅನುದಾನ ರೂ. 24.61 ಲಕ್ಷಗಳನ್ನು ಕೂಡಲೇ ಬಿಡುಗಡೆ ಮಾಡಿ ಉಳಿಕೆ ರೂ. 2128.57 ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಿಕೊಡುವಂತೆ ಕೋರಲಾಗಿದೆ.

ಮೇಲೆ ಓದಲಾದ (5)ರ ಸರ್ಕಾರದ ಆದೇಶ/ತಿದ್ದುಪಡಿಯಲ್ಲಿ, 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 (106)ರಡಿ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ (SAME) ಕಾರ್ಯಕ್ರಮ ಅನುಷ್ಠಾನಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ ಲಭ್ಯವಿದ್ದ ರೂ. 24.61 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (6)ರ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಮತ್ತು ತರಬೇತಿ-ಎಸ್.ಎಂ.ಎ.ಇ. ಯೋಜನೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನಕ್ಕನುಗುಣವಾಗಿ ರಾಜ್ಯದ ಪಾಲನ್ನು ಸೇರಿಸಿ ಲೆಕ್ಕ ಶೀರ್ಷಿಕೆ: 2401-00-800-1-53-059 ರಡಿ ರೂ. 2128.57 ಲಕ್ಷಗಳನ್ನು (ಕೇಂದ್ರದ ಪಾಲು-ರೂ. 1291.91 ಲಕ್ಷ + ರಾಜ್ಯದ ಪಾಲು- ರೂ. 836.66 ಲಕ್ಷ) ಹೆಚ್ಚುವರಿಯಾಗಿ ಮಂಜೂರು ಮಾಡುತ್ತಾ, ಸದರಿ ಹೆಚ್ಚುವರಿ ಅನುದಾನವನ್ನು 2018-19 ನೇ ಸಾಲಿನ ಪೂರಕ ಅಂದಾಜುಗಳು-2ನೇ ಕಂತಿನಲ್ಲಿ ಒದಗಿಸುವ ಮೂಲಕ ಕ್ರಮಬದ್ಧಗೊಳಿಸಲಾಗುವುದು ಎಂದು ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 (059)ರಡಿ ಹೆಚ್ಚುವರಿಯಾಗಿ ಮಂಜೂರಾಗಿರುವ ರೂ. 2128.57 ಲಕ್ಷ ಅನುದಾನವನ್ನು ಕೃಷಿ ಇಲಾಖೆಯು ಬಳಸಲು ಅನುವಾಗುವಂತೆ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ; ಕೃಇ 80 ಕೃಉಇ 2018, ಬೆಂಗಳೂರು, ದಿನಾಂಕ: 21.02.2019.**

2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 (059) ಅಡಿ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮ ಅನುಷ್ಠಾನಕ್ಕೆ ಕೊರತೆಯಾಗಿದ್ದ **ರೂ. 2128.57 ಲಕ್ಷಗಳನ್ನು** (ಎರಡು ಸಾವಿರದ ಒಂದು ನೂರ ಇಪ್ಪತ್ತೆಂಟು ಲಕ್ಷದ ಐವತ್ತೇಳು ಸಾವಿರ ರೂಪಾಯಿಗಳು ಮಾತ್ರ) ಹೆಚ್ಚುವರಿಯಾಗಿ ಪಡೆದು ಬಿಡುಗಡೆ ಮಾಡುತ್ತಾ, ಸದರಿ ಅನುದಾನವನ್ನು ಕೇಂದ್ರದ ಪಾಲಿನ ಶೇ.60 ಹಾಗೂ ರಾಜ್ಯದ ಪಾಲಿನ ಶೇ.40ರ ಅನುಪಾತದಲ್ಲಿ ಅಳವಡಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 101 ವೆಚ್ಚ-4/2019, ದಿನಾಂಕ: 13.02.2019ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)
21/02/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
8. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
14. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.